ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

**GSTIN : 29AALB0060D1ZS**

ಸಂಖ್ಯೆ : ಬೆಂಅಪ್ರಾ/ನಯೋಸ/CLU-16/2021-22/108 /2023-24
No. [Comp No. 154506]

ದಿನಾಂಕ :
Date : 13/04/2023

# ಪ್ರಾರಂಭಿಕ ಪ್ರಮಾಣ ಪತ್ರ

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(A) ರ ಅಡಿಯಲ್ಲಿ)**

ವಿಷಯ:- ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 17.06.2021.
2. ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 1.1.1/2022, ದಿನಾಂಕ 31.01.2022.
3. ಈ ಕಛೇರಿ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/CLU-16/430/2022-23, ದಿನಾಂಕ 25.05.2022.
4. ಈ ಕಛೇರಿ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/CLU-16/2021-22/1681/2022-23, ದಿನಾಂಕ 28.10.2022.
5. ಸರ್ಕಾರದ ಆದೇಶ ಸಂಖ್ಯೆ: ನಅಇ 33 ಬೆಂಆಸೇ 2022, ಬೆಂಗಳೂರು, ದಿನಾಂಕ 03.03.2023.
6. ಈ ಕಛೇರಿ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/CLU-16/2021-22/3985/2022-23, ದಿನಾಂಕ 20.03.2023.
7. ಕೆನರಾ ಬ್ಯಾಂಕ್ ಚಲನ್ ನಂ. GN23037769, ದಿನಾಂಕ 24.03.2023.

******

ಪ್ರಸ್ತಾವನೆ:

ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡಲು ಉಲ್ಲೇಖ (1) ರ ಅರ್ಜಿಯಲ್ಲಿ ಕೋರಿದ್ದ ಪ್ರಸ್ತಾವನೆಯನ್ನು ಉಲ್ಲೇಖ (2) ರಲ್ಲಿ ನಮೂದಿಸಿರುವ ದಿನಾಂಕ 31.01.2022 ರಂದು ನಡೆದ ಪ್ರಾಧಿಕಾರ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 1.1.1/2022 ರ ನಡವಳಿ ಅನುಸಾರ ಉಲ್ಲೇಖ (3) & (4) ರಲ್ಲಿನ ಈ ಕಛೇರಿ ಪತ್ರಗಳಲ್ಲಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.



ಟಿ. ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು 560 020. ದೂರವಾಣಿ : 080-23443206
**T. Chowdaiah Road,Kumarapark West, Bangalore 560 020, Telephone : 080-23443206**

ವಿಷಯ:- ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ.

---

ಉಲ್ಲೇಖ (5) ರ ಸರ್ಕಾರದ ಆದೇಶದಲ್ಲಿ ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಭೂಉಪಯೋಗ ಬದಲಾವಣೆಗೆ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

ಪ್ರಶ್ನಿತ ಜಮೀನಿನ ಭೂಉಪಯೋಗ ಬದಲಾವಣೆ ಮಾಡುವ ಸಂಬಂಧ ಉಲ್ಲೇಖ (6) ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 18 ರಡಿಯಲ್ಲಿ ಉತ್ತಮತೆ ಶುಲ್ಕ, ಪರಿಶೀಲನಾ ಶುಲ್ಕ ಮತ್ತು ಜಿಎಸ್.ಟಿ ಸೇರಿ ಒಟ್ಟು ಮೊತ್ತ ರೂ.2,33,990/- ಗಳನ್ನು ಸಂದಾಯ ಮಾಡುವಂತೆ ಅರ್ಜಿದಾರರಿಗೆ ತಿಳಿಸಲಾಗಿತ್ತು. ಉಲ್ಲೇಖ [7] ರಂತೆ ಅರ್ಜಿದಾರರು ದಿನಾಂಕ 24.03.2023 ರಂದು ರೂ.2,33,990/- ಗಳನ್ನು ಪ್ರಾಧಿಕಾರಕ್ಕೆ ಜಮಾ ಮಾಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರ ಅಡಿಯಲ್ಲಿ ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಭೂಉಪಯೋಗ ಬದಲಾವಣೆ ಬಗ್ಗೆ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಭೂಉಪಯೋಗ ಬದಲಾವಣೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಲಾಗಿದೆ.

## ಷರತ್ತುಗಳು

1. ಅರ್ಜಿದಾರರು ಪ್ರಶ್ನಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮುನ್ನ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (1) ರಡಿಯಲ್ಲಿ ವಲಯ ನಿಯಮಾವಳಿಗಳನ್ವಯ ವಿನ್ಯಾಸ/ ಅಭಿವೃದ್ಧಿ ನಕ್ಷೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮೋದನೆ ಪಡೆಯತಕ್ಕದ್ದು.

ವಿಷಯ:- ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ.

---

2. ಸರ್ಕಾರದ ಆದೇಶ ಸಂಖ್ಯೆ: ನಅಇ 33 ಬೆಂಆಸೇ 2022, ಬೆಂಗಳೂರು ದಿನಾಂಕ 03.03.2023 ರಲ್ಲಿನ ಎಲ್ಲಾ ಷರತ್ತುಗಳನ್ನು ತಪ್ಪದೇ ಪಾಲಿಸತಕ್ಕದ್ದು.
3. ವಸತಿ ಅಭಿವೃದ್ಧಿಗಾಗಿ ಸಂಬಂಧಿಸಿದ ಇಲಾಖೆ / ಸಕ್ಷಮ ಪ್ರಾಧಿಕಾರಗಳಿಂದ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಪಡೆಯತಕ್ಕದ್ದು.
4. ಮಳೆ ನೀರು ಕೊಯ್ಲು ಸಂಗ್ರಹಣೆ ಅಳವಡಿಸಿಕೊಳ್ಳತಕ್ಕದ್ದು.
5. ಯಾವುದೇ ಸಿವಿಲ್ ವ್ಯಾಜ್ಯಗಳಿದ್ದಲ್ಲಿ ನ್ಯಾಯಾಲಯದ ಆದೇಶಕ್ಕೆ ಬದ್ಧರಾಗಿರತಕ್ಕದ್ದು.
6. ಸುಳ್ಳು ಮಾಹಿತಿ ಅಥವಾ ಸಲ್ಲಿಸಿರುವ ಯಾವುದೇ ಮಾಹಿತಿ / ದಾಖಲೆಗಳು ತಪ್ಪಾಗಿದ್ದಲ್ಲಿ / ಫೋರ್ಜರಿ ಆಗಿದ್ದಲ್ಲಿ ಭೂಉಪಯೋಗ ಬದಲಾವಣೆಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ.
7. ಪ್ರಶ್ನಿತ ಜಮೀನಿನಲ್ಲಿ RMP ರಸ್ತೆ / RR / SH/NH ಇತ್ಯಾದಿ ರಸ್ತೆ ಪಂಕ್ತೀಕರಣದಲ್ಲಿ ಬರುವ ಜಮೀನನ್ನು ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪುಕ್ಕಟೆಯಾಗಿ ಹಸ್ತಾಂತರಿಸಬೇಕು ಹಾಗೂ ವಿನ್ಯಾಸ ಅನುಮೋದನೆ ಅನುಮೋದನೆ ಸಂದರ್ಭದಲ್ಲಿ ರಸ್ತೆ ಮಾರ್ಜಿನ್ ನ್ನು ಕಡ್ಡಾಯವಾಗಿ ಬಿಡತಕ್ಕದ್ದು.
8. ಪ್ರಶ್ನಿತ ಜಮೀನಿನಲ್ಲಿ ಇರುವ / ಬಳಿಯಲ್ಲಿ ಇರುವ ಕೆರೆ / ನಾಲಾ / H.T Line / Substation Feeder / Rail Base Mass Transit Line / Rail way Track ಪ್ರದೇಶಗಳಿಗೆ ನಿಯಮಾನುಸಾರ ಬಫರ್ ಜೋನ್ ನ್ನು ಕಾಯ್ದಿರಿಸತಕ್ಕದ್ದು.
9. ಅನುಮೋದನೆ ನೀಡುವ ಸಮಯದಲ್ಲಿ ಸ್ಥಳೀಯ ಯೋಜನಾ ಪ್ರಾಧಿಕಾರ / ಸ್ಥಳೀಯ ಸಂಸ್ಥೆಯಿಂದ ಮೂಲ ದಾಖಲಾತಿಗಳನ್ನು ಪರಿಶೀಲಿಸಿ ಅನುಮೋದನೆ ನೀಡತಕ್ಕದ್ದು.
10. ಪ್ರಶ್ನಿತ ಜಮೀನಿಗೆ ವಸತಿ ಉದ್ದೇಶಕ್ಕೆ ಭೂಪರಿವರ್ತನೆ ಪಡೆದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಅವಶ್ಯ ದಾಖಲೆಗಳನ್ನು ಸಲ್ಲಿಸಿ ವಿನ್ಯಾಸ ಅನಮೋದನೆ ಪಡೆಯತಕ್ಕದ್ದು.
11. ಪ್ರಶ್ನಿತ ಜಮೀನನ್ನು ಉದ್ದೇಶಿತ ಉಪಯೋಗಕ್ಕೆ ಬಳಸುವ ಮೊದಲು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸಮ್ಮತಿ ಪತ್ರ ಪಡೆಯತಕ್ಕದ್ದು.
12. ಭೂಉಪಯೋಗ ಬದಲಾವಣೆಯು ಆಸ್ತಿಯ ಹಕ್ಕಿನ ಪ್ರತಿಪಾದನೆಗೆ ದಾಖಲೆಯಾಗುವುದಿಲ್ಲ ಮತ್ತು ಭೂಸುಧಾರಣಾ ಕಾಯ್ದೆಯಡಿ ಹಾಗೂ ಭೂಕಂದಾಯ ಕಾಯ್ದೆ 1964 ರ ಕಲಂ 136 (3) ರ ಅಡಿಯಲ್ಲಾಗಲೀ, ನ್ಯಾಯಾಲಯದಲ್ಲಾಗಲೀ ಪ್ರಕರಣಗಳು ಬಾಕಿ ಇದ್ದಲ್ಲಿ ಭೂಉಪಯೋಗ ಬದಲಾವಣೆಯು ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ. ಈ ಬಗ್ಗೆ ಅರ್ಜಿದಾರರು ನ್ಯಾಯಾಲಯದ ಅಂತಿಮ ಆದೇಶಕ್ಕೆ ಬದ್ಧರಾಗಿರತಕ್ಕದ್ದು ಮತ್ತು ಯಾವುದೇ ಸಂದರ್ಭದಲ್ಲಿ ಭೂಉಪಯೋಗ ಬದಲಾವಣೆ ಸಂಬಂಧ ಪಾವತಿಸಿರುವ ಶುಲ್ಕಗಳನ್ನು ವಾಪಸ್ ನೀಡಲಾಗುವುದಿಲ್ಲ.

ವಿಷಯ:- ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರಡಿಯಲ್ಲಿ ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ.

---

13. ಪ್ರಶ್ನಿತ ಜಮೀನು 17.0ಮೀ ಅಗಲದ ರಸ್ತೆಗೆ ಹೊಂದಿಕೊಂಡಿದ್ದು, ಸದರಿ ರಸ್ತೆಯನ್ನು RMP-2015 ರಂತೆ 18.00ಮೀ ಅಗಲಕ್ಕೆ ವಿಸ್ತರಿಸಲು ಪ್ರಸ್ತಾಪಿಸಿರುವುದರಿಂದ ರಸ್ತೆ ವಿಸ್ತರಣೆಗೆ ಅಗತ್ಯವಿರುವ ವಿಸ್ತೀರ್ಣವನ್ನು ಕಾಯ್ದಿರಿಸತಕ್ಕದ್ದು.

14. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ / ಸಕ್ಷಮ ಪ್ರಾಧಿಕಾರ ವಿಧಿಸುವ ಇನ್ನಿತರೆ ನಿಬಂಧನೆಗಳನ್ನು ಪಾಲಿಸತಕ್ಕದ್ದು.

ಮೇಲ್ಕಂಡ ಷರತ್ತುಗಳಿಗೊಳಪಡಿಸಿ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಸಿದ್ದಾಪುರ ಗ್ರಾಮದ ಸರ್ವೆ ನಂ.67 ರಲ್ಲಿ 1ಎ-00ಗುಂ ವಿಸ್ತೀರ್ಣದ ಜಮೀನನ್ನು ಕೈಗಾರಿಕೆ (ಹೈಟೆಕ್) ವಲಯದಿಂದ ವಸತಿ ಉಪಯೋಗಕ್ಕೆ ಭೂಉಪಯೋಗ ಬದಲಾವಣೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14-A ರ ಅಡಿಯಲ್ಲಿ ಅನುಮೋದನೆ ನೀಡಲಾಗಿದೆ.

ಆಯುಕ್ತರು
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

Housiey.com

ಇವರಿಗೆ,
ಶ್ರೀ.ಸುಧೀರ್ ಕುಮಾರ್ ಮಿಶ್ರ
ಅಥರೈಸ್ಡ್ ಸಿಗ್ನೇಟರಿ,
ಮೆ:ವಾಟರ್ ಲೈನ್ ಹೋಟೆಲ್ಸ್ ಪ್ರೈ ಲಿ.,
ನಂ.07, ಸಿಗ್ಮ ಟೆಕ್ ಪಾರ್ಕ್,
10ನೇ ಮಹಡಿ, ಗಮ್ಮಾಬ್ಲಾಕ್,
ವೈಟ್ ಫೀಲ್ಡ್ ರಸ್ತೆ, ಬೆಂಗಳೂರು-560 066.